# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರು ವಾರ್ಡ್ ಸಂಖ್ಯೆ: 89- ಜೋಗುಪಾಳ್ಯ ವಾರ್ಡಿನ ದಿನಾಂಕ: 21.04.2022 ರಂದು ನಡೆದ ಸಭೆಯ ನಡವಳಿಗಳು

ಮಾನ್ಯ ಆಯುಕ್ತರು ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)ಪಿಆರ್/35/2020-21/21-09-2020 ರ ಆದೇಶದಂತೆ ದಿನಾಂಕ: 21.04.2022 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಜೋಗುಪಾಳ್ಯ ವಾರ್ಡ್ ಸಂಖ್ಯೆ-89 ಸಭೆ ಕೆನೋಪಿ ಹೋಟೆಲ್ ಪಿ ಯು ಕಟ್ಟಡ 2ನೇ ಮಹಡಿ ಎಂ.ಜಿ ರಸ್ತೆ, ಬೆಂಗಳೂರು - ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಮಾನ್ಯ ಶ್ರೀ.ಎನ್.ಎ.ಹ್ಯಾರಿಸ್ ಶಾಸಕರು ಶಾಂತಿನಗರ ವಿಧಾನ ಸಭಾ ಕ್ಷೇತ್ರ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸಭೆಯು ದಿನಾಂಕ:21.04.2022ರಂದು ನಡೆಯಿತು.

### ಸಭೆಗೆ ಹಾಜರಿದ್ದವರ ವಿವರಗಳು

1) ಮಾನ್ಯ ಶ್ರೀ.ಎನ್.ಎ.ಹ್ಯಾರಿಸ್ ಶಾಸಕರು ಶಾಂತಿನಗರ ವಿಧಾನ ಸಭಾ ಕ್ಷೇತ್ರ, ಅಧ್ಯಕ್ಷರು.
2) ಶ್ರೀ.ಬಿ ಮಹೇಶ್ ಕುಮಾರ್, ನೋಡಲ್ ಅಧಿಕಾರಿ,ಸಹಾಯಕ ನಿಯಂತ್ರಕರು ಹಣಕಾಸು (ಪೂರ್ವ)
3) ಶ್ರೀ. ಮೂರ್ತಿ, ವಾರ್ಡ್ ಸಮಿತಿಯ ಕಾರ್ಯದರ್ಶಿ, ಸಹಾಯಕ ಅಭಿಯಂತರರು ಹಾಗೂ ಬಿಬಿಎಂಪಿ ಇತರ ವಿಭಾಗಗಳ ಅಂದರೆ, ಅರಣ್ಯ ಆರೋಗ್ಯ, ಕಾಮಗಾರಿ, ಘನತ್ಯಾಜ್ಯ ವಿಭಾಗ, ಅಧಿಕಾರಿಗಳು, ಬೆಸ್ಕಾಂ ಮತ್ತು BWSSB ಅಧಿಕಾರಿಗಳು ಹಾಜರಿದ್ದರು.
4) ವಾರ್ಡ್ ಸಮಿತಿ ಸದಸ್ಯರಾದ, ಶ್ರೀ ರಮೇಶ್ ರೆಡ್ಡಿ, ಶ್ರೀ ಹೇಮಂತ್‌ನಾಗ್, ಶ್ರೀ ಉಮೇಶ್ ಮತ್ತು ಚಂದ್ರಶೇಖರ್ ರವರು ಸಭೆಗೆ ಹಾಜರಿದ್ದರು.

ಸಭೆಯನ್ನು ಪ್ರಾರಂಭಿಸುತ್ತಾ ಮೊದಲನೆಯದಾಗಿ ನೋಡಲ್ ಅಧಿಕಾರಿಯವರು ಸಭೆಗೆ ಅಧ್ಯಕ್ಷತೆಯನ್ನು ವಹಿಸಿದ್ದ ಮಾನ್ಯ ಶಾಸಕರು ಮತ್ತು ಹಾಜರಿದ್ದ ಅಧಿಕಾರಿಗಳನ್ನು ಮತ್ತು ಅಹ್ವಾನಿತರಾಗಿದ್ದ ಸ್ಥಳೀಯರು ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ವಾರ್ಡ್ ಸಮಿತಿ ಸಭೆಯಲ್ಲಿ ನೀಡಿರುವ ಈ ಕೆಳಕಂಡ ವಾರ್ಡಿನ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

1) ಇಂದಿರಾನಗರ 10ನೇ ಮುಖ್ಯ ರಸ್ತೆ, 3ನೇ ಅಡ್ಡ ರಸ್ತೆಯಲ್ಲಿ ವಾಸಿಸುವ ನಾಗರಿಕರೊಬ್ಬರು ತಮ್ಮ ನಿವಾಸದಲ್ಲಿ ಕಾವೇರಿ ನೀರು ಒಂದು ವರ್ಷದಿಂದ ಸಮರ್ಪಕವಾಗಿ ನೀರು ಬರುತ್ತಿಲ್ಲ ಆದ್ದರಿಂದ BWSSB ರವರು ತಮ್ಮ ನಿವಾಸಕ್ಕೆ ಹೊಸ ಪೈಪ್ ಕನೆಕ್ಷನನ್ನು ಅಳವಡಿಕೊಡಬೇಕೆಂದು ಕೋರಿರುತ್ತಾರೆ.-AEE BWSSB ಕೂಡಲೆ ಕ್ರಮ ವಹಿಸಲು ಸೂಚಿಸಲಾಗಿದೆ.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯಗಳನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳ ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಪಟ್ಟ ಅಧಿಕಾರಿಗಳು ಕೈಗೊಂಡ ಕ್ರಮದ ವರದಿಯನ್ನು ನೀಡಲು ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ನೋಡೆಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ-89- ಜೋಗುಪಾಳ್ಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು,

1) ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.
3) ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
4) ಮಾನ್ಯ ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸಿದೆ.
5) ವಾಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
6) ಕಛೇರಿ ಪ್ರತಿ.